Akashvani : Bangalore
Regional Bulletin In Kannada
16.06.2025 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದಾವಣಗೆರೆಯಲ್ಲಿ ೧ ಸಾವಿರದ ೩೫೦ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ
- ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿಯಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆ
- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅತೀಸಾರ ನಿಲ್ಲಿಸಿ ಅಭಿಯಾನಕ್ಕೆ ಚಾಲನೆ
- ರಾಜ್ಯಾದ್ಯಂತ ನೈರುತ್ಯ ಮುಂಗಾರು ಸಕ್ರಿಯ; ಕರಾವಳಿಯಲ್ಲಿ ಭಾರೀ ಮಳೆ

**<><*<><>*><>**

ಅಭಿವೃದ್ಧಿ ಕಾರ್ಯಗಳಿಗೆ ರಾಜ್ಯ ಸರ್ಕಾರದ ಬಳಿ ಅನುದಾನದ ಕೊರತೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ದಾವಣಗೆರೆಯಲ್ಲಿಂದು ೧ ಸಾವಿರದ ೩೫೦ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಅಭಿವೃದ್ಧಿ ಕಾರ್ಯಗಳಿಗೆ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಎಂದು ಬಿಜೆಪಿ-ಜೆಡಿಎಸ್ ನಾಯಕರು ಆರೋಪಿಸುತ್ತಿದ್ದಾರೆ. ಆದರೆ ಹಣ ಇಲ್ಲದಿದ್ದರೆ ಇಷ್ಟೊಂದು ಅಭಿವೃದ್ಧಿ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಗ್ಯಾರಂಟಿ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ. ಇದನ್ನು ಸಹಿಸದ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಇಲ-ಸಲ್ಲದ ಸುಳ್ಳು ಹೇಳುತ್ತಿದ್ದಾರೆ ಎಂದು ದೂರಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್, ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಉಪಸ್ಥಿತರಿದ್ದರು.

**<><*<><>*><>**

ಸಹಸ್ರಾರು ವರ್ಷಗಳಿಂದ ಭಾರತೀಯ ಸಂಸ್ಕೃತಿಯಲ್ಲಿ ಯೋಗ ಬೆಸೆದುಹೋಗಿದೆ. ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಂಡರೆ, ದೈಹಿಕ ಮತ್ತು ಮಾನಸಿಕವಾಗಿ ಸದೃಢವಾಗಬಹುದು ಎಂದು ಹಗರಿಬೊಮ್ಮನಹಳ್ಳಿ ತಾಲೂಕಿನ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ವೈದ್ಯ ಡಾಕ್ಟರ್ ಕೆ.ಎಚ್.ಗುರುಬಸವರಾಜ್ ಹೇಳಿದ್ದಾರೆ. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿರುವ ವಿವಿಧ ಕಾರ್ಯಕ್ರಮಗಳ ಬಗ್ಗೆ ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ಜೂನ್ ೨೧ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಹೊಸಪೇಟೆಯ ಫ್ರೀಡಂ ಪಾರ್ಕ್‌ನಲ್ಲಿ ಆಯೋಜಿಸಲಾಗಿದ್ದು, ಇದಕ್ಕೆ ಪೂರ್ವಭಾವಿಯಾಗಿ ಇದೇ ೨೦ ರಂದು ಬೆಳಗ್ಗೆ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಯೋಗ ಸಂಗಮ, ಯೋಗ ಬಂಧನ, ಯೋಗ ಧ್ಯಾನ, ಯೋಗ ಕನೆಕ್ಟ್, ಯೋಗ ಧನುಷ್ ಮತ್ತು ಯೋಗ ಹರಿತ್ ಸೇರಿದಂತೆ ಯೋಗಾಸನಕ್ಕೆ ಸಂಬಂಧಿಸಿದ ೧೦ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಡಾಕ್ಟರ್ ಕೆ.ಎಚ್.ಗುರುಬಸವರಾಜ್ ವಿವರಿಸಿದರು.

<><*<><>*><>

ಗದಗ ಜಿಲ್ಲಾದ್ಯಂತ ಇಂದಿನಿಂದ ಹದಿನೈದು ದಿನಗಳ ಕಾಲ ಅತಿಸಾರ ನಿಲ್ಲಿಸಿ ಅಭಿಯಾನ ಪ್ರಾರಂಭವಾಗಿದೆ ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ್ ತಿಳಿಸಿದ್ದಾರೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳು, ತಾಲೂಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಅತಿಸಾರ ನಿಲ್ಲಿಸುವಲ್ಲಿ ಪ್ರಮುಖವಾಗಿರುವ ಓಆರ್‌ಎಸ್ ಪೊಟ್ಟಣಗಳನ್ನು ಮತ್ತು ಝಿಂಕ್ ಮಾತ್ರೆಗಳನ್ನು ಅಗತ್ಯ ಪ್ರಮಾಣದಲ್ಲಿ ಪೂರೈಸಲಾಗಿದೆ ಎಂದರು.

ಧ್ವನಿ: ಡಾ.ವೆಂಕಟೇಶ ರಾಠೋಡ

ಇನ್ನೊಂದೆಡೆ, ಉಡುಪಿ ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಉಡುಪಿ ಜಿಲ್ಲೆ ರಾಷ್ಟ್ರೀಯ ಆರೋಗ್ಯ ಅಭಿಯಾನ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 'ಅತಿಸಾರ ನಿಲ್ಲಿಸಿ ಅಭಿಯಾನ-೨೦೨೫' ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಬಸವರಾಜ ಜಿ. ಹುಬ್ಬಳ್ಳಿ ಉದ್ಘಾಟಿಸಿದರು.

<><*<><>*><>

ಹನುಮನು ಉದಯಿಸಿದ ಪುಣ್ಯ ಭೂಮಿ ಅಂಜನಾದ್ರಿ ಬೆಟ್ಟದ ಪ್ರದೇಶವನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಈ ವರ್ಷದ ಡಿಸೆಂಬರ್ ೧೫ಕ್ಕೆ ವಸತಿ ಸಮುಚ್ಚಯ ಕಾಮಗಾರಿ ಪೂರ್ಣಗೊಳಿಸುವ ಗುರಿಯೊಂದಿಗೆ ಕಾಮಗಾರಿಯ ವೇಗ ಹೆಚ್ಚಿಸಲಾಗಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ. ಆನೆಗುಂದಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಅಂಜನಾದ್ರಿ ಬೆಟ್ಟದಲ್ಲಿ ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ, ಕೊಪ್ಪಳ ಜಿಲ್ಲಾಡಳಿತದಿಂದ ಅಂಜನಾದ್ರಿ ಅಭಿವೃದ್ಧಿ ಕುರಿತು ನಡೆದ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಕೊಪ್ಪಳ ಜಿಲ್ಲೆಯ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ, ಸಂಸದ ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿ ನಲೀನ ಅತುಲ್ ಸೇರಿದಂತೆ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲೂಕನ್ನು ರಾಜ್ಯದ ಮೊಟ್ಟ ಮೊದಲ ಸಾವಯವ ತಾಲೂಕನ್ನಾಗಿ ಪರಿವರ್ತಿಸುವ ಕಾರ್ಯಕ್ರಮ ನಾಳೆ ಜೊಯಿಡಾದ ಬಾಬು ಜಗಜೀವನರಾಮ ಸಭಾಭವನದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದ್ದು, ಇಂದು ಶಾಲಾ- ಕಾಲೇಜುಗಳಿಗೆ ರಜೆ ನೀಡಲಾಗಿತ್ತು. ಕಳೆದ ಕೆಲವು ದಿನಗಳಿಂದ ಜಿಲ್ಲೆಯಲ್ಲಿ ಎಡೆಬಿಡದೆ ಮಳೆಯಾಗುತ್ತಿದೆ. ಮುಂಜಾಗೃತಾ

ಕ್ರಮವಾಗಿ ಜಿಲ್ಲೆಯಲ್ಲಿ ೬ ಸಾಂತ್ವನ ಕೇಂದ್ರಗಳನ್ನು ಗೊತ್ತುಪಡಿಸಲಾಗಿದ್ದು, ಒಂದು ಕೇಂದ್ರ ಕಾರ್ಯನಿರ್ವಹಿಸುತ್ತಿದೆ. ಜನವರಿಯಿಂದ ಜೂನ್ ೧೫ರವರೆಗೆ ಜಿಲೆಯಲ್ಲಿ ಸರಾಸರಿ ೫೯೬.೯ ಮಿಲಿ ಮೀಟರ್ ಮಳೆಯಾಗುತ್ತಿದ್ದು, ಈ ಬಾರಿ ೧ ಸಾವಿರದ ೪೧೪.೮ ಮಿಲಿಮೀಟರ್ ಮಳೆಯಾಗಿದೆ. ಮಂಗಳೂರು ನಗರಕ್ಕೆ ನೀರುಣಿಸುವ ಬಂಟ್ವಾಳ ತಾಲೂಕಿನ ತುಂಬೆ ವೆಂಟೆಡ್ ಅಣೆಕಟ್ಟೆಯ ನೀರಿನ ಮಟ್ಟ ೪.೫೦ ಮೀಟರ್‌ಗೆ ಏರಿಕೆಯಾಗಿದೆ. ಜೀವನದಿಗಳಾದ ನೇತ್ರಾವತಿ, ಕುಮಾರಧಾರ ನದಿಗಳು ತುಂಬಿ ಹರಿಯುತ್ತಿವೆ. ಮಳೆಯ ಪರಿಣಾಮ ಜಿಲ್ಲೆಯಲ್ಲಿ ಸಾಕಷ್ಟು ಹಾನಿಯೂ ಸಂಭವಿಸಿದೆ. ಏಪ್ರಿಲ್ ೧ರಿಂದ ಇದುವರೆಗೆ ಒಟ್ಟು ೭೫೧ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೭೨ ಮನೆಗಳು ಸಂಪೂರ್ಣ ನಾಶವಾಗಿವೆ. ಪ್ರಾಕೃತಿಕ ವಿಕೋಪದಿಂದ ಒಟ್ಟು ೫ ಮಂದಿ ಸಾವನ್ನಪ್ಪಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ೩೫ ಜಾನುವಾರು ಪ್ರಾಣಹಾನಿ ಸಂಭವಿಸಿದೆ. ಭಾರೀ ಮಳೆಯ ಪರಿಣಾಮ ೪.೯೩೪ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿದೆ. ೪ ಸಾವಿರದ ೧೨೩ ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ೧೧೫ ವಿದ್ಯುತ್ ಪರಿವರ್ತಕಗಳು ಹಾನಿಗೀಡಾಗಿವೆ. ೧೯ ಸೇತುವೆಗಳಿಗೆ ಹಾನಿಯಾಗಿದೆ. ೨೦೬.೪೪ ಕಿಲೋಮೀಟರ್ ಉದ್ದದ ರಸ್ತೆಗಳು ಹದಗೆಟ್ಟಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ.

<><*<><>*><>

ಶಿವಮೊಗ್ಗ ಜಿಲ್ಲೆಯಾದ್ಯಂತ ಮಳೆ ಚುರುಕುಗೊಂಡಿದೆ. ಮಳೆ ಹಿನ್ನೆಲೆಯಲ್ಲಿ ಮನೆಯೊಂದು ಕುಸಿದು ಬಿದ್ದು, ಶತಾಯುಷಿಯೊಬ್ಬರು ಸಾವನ್ನಪ್ಪಿದ್ದಾರೆ. ರಾತ್ರಿ ಸುರಿದ ಮಳೆಗೆ ಕುಂಸಿ ಪೊಲೀಸ್ ಠಾಣೆ ವ್ಯಾಪ್ತಿಯ ಆಡಗಡಿ ಗ್ರಾಮದ ಹೇಮಾವತಿ ಅವರ ಮಣ್ಣಿನ ಮನೆ ಕುಸಿದು ಬಿದ್ದಿದೆ. ಮನೆಯಲ್ಲಿದ್ದ ಶತಾಯುಷಿ ಸಿದ್ದಮ್ಮ ಸಾವನ್ನಪ್ಪಿದ್ದಾರೆ. ಇವರು ಹೊನ್ನಾಳಿ ತಾಲೂಕಿನ ಕುಂಕೋವ ಗ್ರಾಮದವರಾಗಿದ್ದಾರೆ. ಮನೆಯಲ್ಲಿದ್ದ ಇತರೆ ಮೂರು ಜನರಿಗೆ ಸಣ್ಣ-ಪುಟ್ಟ ಗಾಯಗಳಾಗಿವೆ.

<><*<><>*><>

ಕೊಡಗು ಜಿಲ್ಲೆಯಾದ್ಯಂತ ಇಂದು ಕೂಡ ಮುಂಗಾರು ಬಿರುಸಾಗಿತ್ತು. ಮಡಿಕೇರಿ ವ್ಯಾಪ್ತಿಯಲ್ಲಿ ಕಳೆದ ೨೪ ಗಂಟೆಗಳಿಂದ ಭಾರೀ ಮಳೆಯಾಗುತ್ತಲೇ ಇದೆ. ಜಿಲ್ಲೆಯಲ್ಲಿ ಹೆಚ್ಚಿರುವ ಮಳೆ ಹಿನ್ನೆಲೆಯಲ್ಲಿ ಇಂದು ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ರಜೆ ನೀಡಲಾಗಿತ್ತು. ನದಿ ಪಾತ್ರಗಳಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ಕೊಡಗಿನ ಪ್ರಮುಖ ಜಲಾಶಯ ಹಾರಂಗಿಗೆ ನೀರಿನ ಒಳಹರಿವು ಹೆಚ್ಚಾಗಿದೆ. ೧೦ ಸಾವಿರ ಕ್ಯೂಸೆಕ್ ನೀರನ್ನು ಜಲಾಶಯದಿಂದ ನದಿಗೆ ಬಿಡಲಾಗಿದೆ. ಪ್ರಸ್ತುತ ೪ ಸಾವಿರದ ೭೩೬ ಕ್ಯೂಸೆಕ್ ನೀರಿನ ಒಳಹರಿವಿದೆ. ೨ ಸಾವಿರದ ೮೫೯ ಅಡಿ ಗರಿಷ್ಠ ಸಂಗ್ರಹ ಸಾಮರ್ಥ್ಯದ ಹಾರಂಗಿಯಲ್ಲಿ ಇಂದು ೨ ಸಾವಿರದ ೮೫೧ ಅಡಿ ನೀರಿನ ಸಂಗ್ರಹವಿದೆ.

<><*<><>*><>

ರಾಜ್ಯಾದ್ಯಂತ ನೈರುತ್ಯ ಮುಂಗಾರು ಸಕ್ರಿಯವಾಗಿದೆ. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ಒಳನಾಡಿನ ಅನೇಕ ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಕನ್ನಡ ಜಿಲ್ಲೆಯ ಮಂಕಿಯಲ್ಲಿ ಅತೀ ಹೆಚ್ಚು ೨೭ ಸೆಂಟಿ ಮೀಟರ್ ಮಳೆಯಾಗಿದೆ.

ಸಿದ್ದಾಪುರ ೨೫, ಮಂಗಳೂರು ವಿಮಾನ ನಿಲ್ದಾಣ ೨೩, ಆಗುಂಬೆ ಮತ್ತು ಕೊಟ್ಟಿಗೆಹಾರ ತಲಾ ೨೦, ಕ್ಯಾಸಲ್ ರಾಕ್ ೧೯, ಪಣಂಬೂರು ೧೮, ಗೇರುಸೊಪ್ಪ, ಕುಂದಾಪುರ ಮತ್ತು ಉಪ್ಪಿನಂಗಡಿ ತಲಾ ೧೭, ಬಂಟ್ವಾಳ ೧೫, ಕಾರ್ಕಳ ಮತ್ತು ಮಂಗಳೂರು ತಲಾ ೧೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿಯಲ್ಲಿ ಗಂಟೆಗೆ ೫೦ ರಿಂದ ೬೦ ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚನೆ ನೀಡಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತ-ಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಗಾಳಿಯೊಂದಿಗೆ ಹಗುರ ಮಳೆ ಸಾಧ್ಯತೆ. ಗರಿಷ್ಠ ತಾಪಮಾನ ೨೮ ಹಾಗೂ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

<><*<><>*><>

ಮೇಲ್ದರ್ಜೆಗೇರಿಸಿದ ರಾಯಚೂರು ಜಿಲ್ಲಾ ಮುಖ್ಯ ರಸ್ತೆಗಳ ವಿಸ್ತರಣೆಗೆ ಅನುದಾನ ನೀಡಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ರಾಯಚೂರ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>